**All India Radio: Bangalore**
**National Bulletin In Kannada**
**03.06.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.06.2026 7.35 am**

**<>><><*><><<>**

ಮುಖ್ಯಾಂಶಗಳು

**೧. ವೆನೆಜುವೆಲಾ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಇಂದಿನಿಂದ ನಾಲ್ಕು ದಿನಗಳ ಭಾರತ ಪ್ರವಾಸ; ದ್ವಿಪಕ್ಷೀಯ ಬಾಂಧವ್ಯ ವೃದ್ಧಿಗೆ ಒತ್ತು**

**೨. ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಇಂದು ಹಿರಿಯ ಕಾಂಗ್ರೆಸ್ ನಾಯಕ ಡಿ.ಕೆ.ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ**

**೩. ನವದೆಹಲಿಯಲ್ಲಿ ಇಂದು ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ೨೦೨೫ ಪ್ರದಾನ ಸಮಾರಂಭ; ಕರ್ನಾಟಕದ ಆರು ಪಂಚಾಯಿತಿಗಳಿಗೆ ಗೌರವ**

**೪. ವಿವಾಹಿತ ಹೆಣ್ಣುಮಕ್ಕಳಿಗೂ ಅನುಕಂಪದ ಆಧಾರದ ಉದ್ಯೋಗ-ಸೌಲಭ್ಯ - ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು**

**೫. ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್; ಭಾರತದ ವಿರುದ್ಧ ಇಂಗ್ಲೆಂಡ್‌ಗೆ ಸರಣಿ ಜಯ**

**<>><><*><><<>**

ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಇಂದಿನಿಂದ ಭಾರತಕ್ಕೆ ನಾಲ್ಕು ದಿನಗಳ ಅಧಿಕೃತ ಪ್ರವಾಸ ಕೈಗೊಳ್ಳುತ್ತಿದ್ದಾರೆ. ಅವರೊಂದಿಗೆ ಅಲ್ಲಿನ ವಿದೇಶಾಂಗ, ಆರ್ಥಿಕತೆ ಮತ್ತು ಹಣಕಾಸು ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರನ್ನೊಳಗೊಂಡ ಉನ್ನತ ಮಟ್ಟದ ನಿಯೋಗವೂ ಭಾರತಕ್ಕೆ ಆಗಮಿಸುತ್ತಿದೆ. ಪ್ರವಾಸದ ಅವಧಿಯಲ್ಲಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಈ ಉನ್ನತ ಮಟ್ಟದ ಮಾತುಕತೆಯು ಪ್ರಮುಖವಾಗಿ ವ್ಯಾಪಾರ, ಹೂಡಿಕೆ, ಇಂಧನ, ನವೀಕರಿಸಬಹುದಾದ ಇಂಧನ, ಆರೋಗ್ಯ ರಕ್ಷಣೆ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ವಿಸ್ತರಿಸುವತ್ತ ಗಮನ ಹರಿಸಲಿದೆ. ವೆನೆಜುವೆಲಾದ ಇಂಧನ ವಲಯದಲ್ಲಿ ಭಾರತದ ಸಾರ್ವಜನಿಕ ವಲಯದ

ಉದ್ದಿಮೆಗಳು ಈಗಾಗಲೇ ಗಣನೀಯ ಹೂಡಿಕೆ ಮಾಡಿದ್ದು, ಅಲ್ಲಿ ತಮ್ಮ ಉಪಸ್ಥಿತಿಯನ್ನು ಮತ್ತಷ್ಟು ಹೆಚ್ಚಿಸಿಕೊಳ್ಳಲು ಉತ್ಸುಕವಾಗಿವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ಪ್ರವಾಸ ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧವನ್ನು ಬಲಪಡಿಸುವುದರ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿನ ಸಹಭಾಗಿತ್ವವನ್ನು ಮತ್ತಷ್ಟು ಆಳಗೊಳಿಸಲಿದೆ ಎಂದು ನಿರೀಕ್ಷಿಸಲಾಗಿದೆ.

<><><*><><>

ಹಿರಿಯ ಕಾಂಗ್ರೆಸ್ ನಾಯಕ ಡಿ.ಕೆ.ಶಿವಕುಮಾರ್ ಅವರು ಇಂದು ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಬೆಂಗಳೂರಿನ ಲೋಕಭವನದಲ್ಲಿ ಸಂಜೆ ೪ ಗಂಟೆಗೆ ನಡೆಯಲಿರುವ ಸಮಾರಂಭದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಡಿ.ಕೆ.ಶಿವಕುಮಾರ್ ಹಾಗೂ ಹೊಸ ಸಚಿವ ಸಂಪುಟದ ಸದಸ್ಯರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಲಿದ್ದಾರೆ. ಸಮಾರಂಭದಲ್ಲಿ ಆದಿಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿ ಸೇರಿದಂತೆ ಸುಮಾರು ೫೫ ಮಠಾಧೀಶರು ಹಾಗೂ ಧಾರ್ಮಿಕ ನಾಯಕರನ್ನು ಆಹ್ವಾನಿಸಲಾಗಿದೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿದ ಕೆಲವೇ ದಿನಗಳಲ್ಲಿ ಈ ಮಹತ್ವದ ರಾಜಕೀಯ ಬದಲಾವಣೆ ನಡೆದಿದ್ದು, ಉಪಮುಖ್ಯಮಂತ್ರಿಯಾಗಿದ್ದ ಡಿ.ಕೆ.ಶಿವಕುಮಾರ್ ಅವರಿಗೆ ಈಗ ರಾಜ್ಯದ ಅತ್ಯುನ್ನತ ಹುದ್ದೆಯ ಜವಾಬ್ದಾರಿ ಹಸ್ತಾಂತರವಾಗುತ್ತಿದೆ. ಈ ಬೆಳವಣಿಗೆಯು, ಕರ್ನಾಟಕ ಕಾಂಗ್ರೆಸ್‌ನಲ್ಲಿ ದೀರ್ಘಕಾಲದಿಂದ ನಡೆಯುತ್ತಿದ್ದ ನಾಯಕತ್ವದ ಚರ್ಚೆಗಳಿಗೆ ತೆರೆ ಎಳೆದಿದೆ. ೨೦೨೩ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಜಯ ಸಾಧಿಸಿದಾಗಿನಿಂದಲೂ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಹುದ್ದೆಯ ಪ್ರಬಲ ಆಕಾಂಕ್ಷಿಯಾಗಿದ್ದರು. ಮತ್ತೊಂದೆಡೆ, ಈ ಪ್ರಮುಖ ರಾಜಕೀಯ ಪರಿವರ್ತನೆಯ ಸಂದರ್ಭದಲ್ಲಿ ರಾಜ್ಯ ಘಟಕದಲ್ಲಿ ಸ್ಥಿರತೆ ಮತ್ತು ಸಮನ್ವಯವನ್ನು ಕಾಯ್ದುಕೊಳ್ಳುವ ಉದ್ದೇಶದಿಂದ, ಕಾಂಗ್ರೆಸ್ ಹೈಕಮಾಂಡ್ ಹಿರಿಯ ನಾಯಕ ಸಿದ್ದರಾಮಯ್ಯ ಅವರನ್ನು ಪಕ್ಷದ ಅತ್ಯುನ್ನತ ನಿರ್ಧಾರ ಕೈಗೊಳ್ಳುವ ಸಮಿತಿಯಾದ 'ಕಾಂಗ್ರೆಸ್ ಕಾರ್ಯಕಾರಿ ಸಮಿತಿ'ಗೆ ನೇಮಕ ಮಾಡಿದೆ.

<><><*><><>

ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ೨೦೨೫ ಪ್ರದಾನ ಸಮಾರಂಭ ಇಂದು ನವದೆಹಲಿಯಲ್ಲಿ ನಡೆಯಲಿದೆ. ದೇಶಾದ್ಯಂತದ ೪೨ ಅತ್ಯುತ್ತಮ ಪಂಚಾಯತ್‌ಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು. ಸಮಾರಂಭದಲ್ಲಿ, ದೀನ್ ದಯಾಳ್ ಉಪಾಧ್ಯಾಯ ಪಂಚಾಯತ್ ಸತತ ವಿಕಾಸ ಪುರಸ್ಕಾರ ವಿಭಾಗದ ಅಡಿಯಲ್ಲಿ ೩೪ ಗ್ರಾಮ ಪಂಚಾಯತ್‌ಗಳಿಗೆ ಮತ್ತು ನಾನಾಜಿ

ದೇಶ್‌ಮುಖ್ ಸರ್ವೋತ್ತಮ ಪಂಚಾಯತ್ ಸತತ ವಿಕಾಸ ಪುರಸ್ಕಾರ ವಿಭಾಗದ ಅಡಿಯಲ್ಲಿ ಎಂಟು ಪಂಚಾಯತ್‌ಗಳಿಗೆ ಪ್ರಶಸ್ತಿ ನೀಡಲಾಗುವುದು. ಪ್ರಶಸ್ತಿ ಪಡೆದ ಪಂಚಾಯತ್‌ಗಳ ಮುಖ್ಯಸ್ಥರು ತಮ್ಮ ಅತ್ಯುತ್ತಮ ಅಭ್ಯಾಸಗಳು ಮತ್ತು ಸಾಧನೆಗಳ ಕುರಿತು ಪ್ರಸ್ತುತಿ ಸಹ ನೀಡಲಿದ್ದಾರೆ. ದೇಶಾದ್ಯಂತದ ೪೨ ಅತ್ಯುತ್ತಮ ಪಂಚಾಯಿತಿಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತಿದೆ. ಕರ್ನಾಟಕದ ಆರು ಗ್ರಾಮ ಪಂಚಾಯಿತಿಗಳು ಅಭಿವೃದ್ಧಿ ಪುರಸ್ಕಾರಕ್ಕೆ ಭಾಜನವಾಗಿವೆ. ಆಯ್ಕೆಯಾದ ಆರು ಗ್ರಾಮ ಪಂಚಾಯಿತಿಗಳಲ್ಲಿ ಐದು ಪಂಚಾಯಿತಿಗಳು ಉಡುಪಿ ಜಿಲ್ಲೆಗೆ ಸೇರಿವೆ. ಹೆಬ್ರಿ ತಾಲೂಕಿನ ಮುದ್ರಾಡಿ ಮತ್ತು ಮಡಾಮಕ್ಕಿ, ಕುಂದಾಪುರ ತಾಲೂಕಿನ ವಂಡ್ಸೆ ಮತ್ತು ಹಕ್ಲಾಡಿ ಹಾಗೂ ಕಾರ್ಕಳ ತಾಲೂಕಿನ ಸಾಣೂರು ಉಡುಪಿ ಜಿಲ್ಲೆಯಿಂದ ಆಯ್ಕೆಯಾದ ಐದು ಗ್ರಾಮ ಪಂಚಾಯತ್‌ಗಳಾಗಿವೆ. ಬೆಂಗಳೂರು ನಗರ ಜಿಲ್ಲೆಯ ಹಾಲನಾಯಕನಹಳ್ಳಿ ರಾಷ್ಟ್ರೀಯ ಮಟ್ಟದ ಪುರಸ್ಕಾರಕ್ಕೆ ಆಯ್ಕೆಯಾಗಿರುವ ಮತ್ತೊಂದು ಗ್ರಾಮ ಪಂಚಾಯತ್ ಆಗಿದೆ.

**<><><*><><>**

ಪಶ್ಚಿಮ ಬಂಗಾಳ ಸರ್ಕಾರವು, ರಾಜ್ಯದಾದ್ಯಂತ ಬೃಹತ್ ಸಾಮಾಜಿಕ ಕಲ್ಯಾಣ ಉಪಕ್ರಮವಾದ 'ಅನ್ನಪೂರ್ಣ ಯೋಜನೆ'ಗೆ ಇಂದು ಅಧಿಕೃತವಾಗಿ ಚಾಲನೆ ನೀಡಲಿದೆ. ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ಉದ್ಘಾಟಿಸಲಿದ್ದು, ಇಡೀ ರಾಜ್ಯವನ್ನು ಒಳಗೊಳ್ಳುವ ನಿಟ್ಟಿನಲ್ಲಿ ಅತ್ಯಂತ ವ್ಯವಸ್ಥಿತವಾಗಿ ಈ ಬೃಹತ್ ಕಾರ್ಯಕ್ರಮವನ್ನು ಸಂಘಟಿಸಲಾಗಿದೆ. ಮುಖ್ಯಮಂತ್ರಿಗಳು ಪ್ರಧಾನ ಸಮಾರಂಭದಲ್ಲಿ ಈ ಯೋಜನೆಗೆ ಚಾಲನೆ ನೀಡಿದರೆ, ರಾಜ್ಯದ ಎಲ್ಲಾ ಬ್ಲಾಕ್‌ಗಳು, ಪುರಸಭೆಗಳು ಮತ್ತು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿರುವ ಫಲಾನುಭವಿಗಳು ವರ್ಚುವಲ್ ಮೂಲಕ ಏಕಕಾಲದಲ್ಲಿ ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

**<><><*><><>**

ವಿವಾಹಿತ ಹೆಣ್ಣುಮಕ್ಕಳನ್ನು, ಅನುಕಂಪದ ಆಧಾರದ ಮೇಲೆ ನೀಡುವ ಉದ್ಯೋಗದ ಸೌಲಭ್ಯದಿಂದ ಹೊರಗಿಡಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಕುಟುಂಬದ ವ್ಯಾಖ್ಯಾನದಿಂದ ವಿವಾಹಿತ ಹೆಣ್ಣುಮಕ್ಕಳನ್ನು ಹೊರಗಿಡುವುದು ಸಂಪೂರ್ಣವಾಗಿ ಅಸಮರ್ಥನೀಯ ಮತ್ತು ಅಸಾಂವಿಧಾನಿಕ ಎಂದು ನ್ಯಾಯಾಲಯ ತಿಳಿಸಿದೆ. ಅಲಹಾಬಾದ್ ಹೈಕೋರ್ಟ್‌ನ ಹಳೆಯ ಆದೇಶವನ್ನು ಬದಿಗೆ ಸರಿಸಿದ ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಆಲೋಕ್ ಅರಾಧೆ ಅವರ ಪೀಠ, ಈ ಮಹತ್ವದ ಅವಲೋಕನ ಮಾಡಿದೆ.

ಅನುಕಂಪದ ಆಧಾರದ ನೇಮಕಾತಿಗಾಗಿ ಕುಟುಂಬದ ವ್ಯಾಖ್ಯಾನದಲ್ಲಿ ವಿವಾಹಿತ ಮಗಳು ಸೇರುವುದಿಲ್ಲ ಎಂದು ಈ ಹಿಂದೆ ಹೈಕೋರ್ಟ್ ತೀರ್ಪು ನೀಡಿತ್ತು. ಸರ್ಕಾರಿ ಉದ್ಯೋಗಿಯೊಬ್ಬರು ಸೇವೆಯಲ್ಲಿದ್ದಾಗ ಮರಣ ಹೊಂದಿದರೆ ಅಥವಾ ವೈದ್ಯಕೀಯ ಕಾರಣಗಳಿಗಾಗಿ ಅವಧಿಗಿಂತ ಮುನ್ನ ನಿವೃತ್ತಿ ಹೊಂದಿದರೆ, ಅವರ ಕುಟುಂಬದ ಸದಸ್ಯರೊಬ್ಬರಿಗೆ ಸರ್ಕಾರ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡುತ್ತದೆ. ಮೃತ ಪಡಿತರ ವ್ಯಾಪಾರಿಯೊಬ್ಬರ ವಿವಾಹಿತ ಮಗಳು, ಅನುಕಂಪದ ಆಧಾರದ ಮೇಲೆ ತಮಗೆ ನ್ಯಾಯಬೆಲೆ ಅಂಗಡಿಯ ಡೀಲರ್ ಹುದ್ದೆ ನೀಡಲು ನಿರಾಕರಿಸಿದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ವಿವಾಹಿತ ಹೆಣ್ಣುಮಕ್ಕಳನ್ನು ಕುಟುಂಬದ ವ್ಯಾಖ್ಯಾನದಿಂದ ಹೊರಗಿಟ್ಟಿದ್ದ ಸರ್ಕಾರದ ೨೦೧೯ರ ಆದೇಶವನ್ನು ಅರ್ಜಿದಾರರು ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದರು.

**<>><><*><><<>**

ದೇಶದ ಸಾರ್ವಭೌಮತೆ ಮತ್ತು ವೈಯಕ್ತಿಕ ಸ್ವಾತಂತ್ರ್ಯದ ನಡುವೆ ಸಂಘರ್ಷ ಉಂಟಾದರೆ ಸಾರ್ವಭೌಮತೆಗೇ ಮೊದಲ ಆದ್ಯತೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಮಾದಕ ದ್ರವ್ಯ ಮತ್ತು ಸೈಕೋಟ್ರೋಪಿಕ್ ಪದಾರ್ಥಗಳ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಇದು ಹೆಚ್ಚು ಅನ್ವಯಿಸುತ್ತದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಜೈಲಿನ ಒಳಗಿನಿಂದಲೇ ಮೊಬೈಲ್ ಫೋನ್ ಬಳಸಿ ಮಾದಕ ದ್ರವ್ಯ ಸಾಗಣೆ ಜಾಲವನ್ನು ನಿರ್ವಹಿಸುತ್ತಿದ್ದ ಆರೋಪಿಗೆ ಜಾಮೀನು ನೀಡಿದ್ದ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಆದೇಶವನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ. ಆರೋಪಿಯು, ಈ ಹಿಂದೆಯೂ ಇದೇ ರೀತಿಯ ಎನ್‌ಡಿಪಿಎಸ್ ಕಾಯ್ದೆಯಡಿ ಅಪರಾಧ ಎಸಗಿದ ಇತಿಹಾಸ ಹೊಂದಿರುವುದರಿಂದ, ಜಾಮೀನಿನ ಮೇಲೆ ಹೊರಬಂದಾಗ ಆತ ಮತ್ತೆ ಇಂತಹ ಕೃತ್ಯ ಎಸಗುವುದಿಲ್ಲ ಎಂದು ಹೇಳಲು ಸಾಧ್ಯವಿಲ್ಲ ಎಂದು ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

**<>><><*><><<>**

ಭಾರತೀಯ ನಾಗರಿಕರು ಜರ್ಮನಿಯ ವಿಮಾನ ನಿಲ್ದಾಣಗಳ ಮೂಲಕ ಮೂರನೇ ದೇಶಕ್ಕೆ ಪ್ರಯಾಣಿಸುವಾಗ ಇನ್ನುಮುಂದೆ 'ಏರ್‌ಪೋರ್ಟ್ ಟ್ರಾನ್ಸಿಟ್ ವೀಸಾ' ಹೊಂದುವ ಅಗತ್ಯವಿಲ್ಲ ಎಂದು ಭಾರತದಲ್ಲಿನ ಜರ್ಮನ್ ರಾಯಭಾರ ಕಚೇರಿ ಪ್ರಕಟಿಸಿದೆ. ಈ ನಿಯಮವು, ಇಂದಿನಿಂದಲೇ ಜಾರಿಗೆ ಬರಲಿದ್ದು, ಅಂತಾರಾಷ್ಟ್ರೀಯ ಸ್ಥಳಗಳಿಗೆ ಜರ್ಮನಿ ಮಾರ್ಗವಾಗಿ ಪ್ರಯಾಣಿಸುವ ಭಾರತೀಯರಿಗೆ ಇದು ನೆರವಾಗಲಿದೆ. ಈ ತೀರ್ಮಾನವು, ಉಭಯ ದೇಶಗಳ ನಡುವೆ ಬೆಳೆಯುತ್ತಿರುವ ದ್ವಿಪಕ್ಷೀಯ ಬಾಂಧವ್ಯದ ಸಂಕೇತವಾಗಿದೆ ಎಂದು ರಾಯಭಾರ ಕಚೇರಿ

ಬಣ್ಣಿಸಿದೆ. ಜನರ ಸುಲಭ ಸಂಚಾರಕ್ಕೆ ಅನುವು ಮಾಡಿಕೊಡುವ ಮೂಲಕ ಭಾರತದೊಂದಿಗಿನ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸಲು ಜರ್ಮನ್ ಸರ್ಕಾರ ಬದ್ಧವಾಗಿದೆ ಎಂಬುದನ್ನು ಈ ಮಹತ್ವದ ನಿರ್ಧಾರವು ಪುಷ್ಟೀಕರಿಸಿದೆ.

**<>><><*><><<>**

ಬಾಂಗ್ಲಾದೇಶದ ವಿದೇಶಾಂಗ ಸಚಿವ ಡಾ.ಖಲೀಲೂರ್ ರೆಹಮಾನ್ ಅವರು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೧ನೇ ಅಧಿವೇಶನದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಜಾಗತಿಕ ಮಟ್ಟದಲ್ಲಿ ನಡೆದ ತೀವ್ರ ಪೈಪೋಟಿಯ ಚುನಾವಣೆಯಲ್ಲಿ ೯೯ ಮತಗಳನ್ನು ಪಡೆದ ಅವರು, ೯೧ ಮತಗಳನ್ನು ಗಳಿಸಿದ ಸೈಪ್ರಸ್‌ನ ಆಂಡ್ರಿಯಾಸ್ ಕಾಕೌರಿಸ್ ಅವರನ್ನು ಸೋಲಿಸಿದರು. ಏಷ್ಯಾ ಪೆಸಿಫಿಕ್ ಒಕ್ಕೂಟದ ಸರದಿಯ ಆಧಾರದ ಮೇಲೆ ಆಯ್ಕೆಯಾಗಿರುವ ಇವರ ಒಂದು ವರ್ಷದ ಅಧಿಕಾರಾವಧಿ ಸೆಪ್ಟೆಂಬರ್‌ನಿಂದ ಆರಂಭವಾಗಲಿದ್ದು, ಮಾನವ ಹಕ್ಕುಗಳ ರಕ್ಷಣೆ ಹಾಗೂ ಜಾಗತಿಕ ಒಗ್ಗಟ್ಟಿಗೆ ಶ್ರಮಿಸುವುದಾಗಿ ಡಾ. ರೆಹಮಾನ್ ತಿಳಿಸಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಡಾ. ರೆಹಮಾನ್ ಅವರಿಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅಭಿನಂದನೆ ಸಲ್ಲಿಸಿದ್ದಾರೆ. ಭಾರತ ಮತ್ತು ಬಾಂಗ್ಲಾದೇಶಗಳ ಜಂಟಿ ಆದ್ಯತೆಗಳನ್ನು ಮುನ್ನಡೆಸಲು ಹಾಗೂ ಅಂತಾರಾಷ್ಟ್ರೀಯ ಸಹಕಾರವನ್ನು ಬಲಪಡಿಸಲು ಅವರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸಲು ಎದುರುನೋಡುತ್ತಿರುವುದಾಗಿ ಸಚಿವ ಡಾ.ಎಸ್.ಜೈಶಂಕರ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

**<>><><*><><<>**

ಇಂಗ್ಲೆಂಡ್‌ನ ಟಾಂಟನ್‌ನಲ್ಲಿ ನಿನ್ನೆ ರಾತ್ರಿ ನಡೆದ ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿ ಇಂಗ್ಲೆಂಡ್ ಮಹಿಳಾ ತಂಡವು ಭಾರತದ ವಿರುದ್ಧ ೬ ವಿಕೆಟ್‌ಗಳ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಇಂಗ್ಲೆಂಡ್ ಸರಣಿಯನ್ನು ೨-೧ ಅಂತರದಿಂದ ಕೈವಶ ಮಾಡಿಕೊಂಡಿದೆ. ಪಂದ್ಯದಲ್ಲಿ ಭಾರತ ತಂಡ ನೀಡಿದ್ದ ೧೮೦ ರನ್‌ಗಳ ಸವಾಲಿನ ಗುರಿಯನ್ನು ಬೆನ್ನಟ್ಟಿದ ಇಂಗ್ಲೆಂಡ್, ನಾಯಕಿ ಹೆದರ್ ನೈಟ್ ಮತ್ತು ಅಲೈಸ್ ಕ್ಯಾಪ್ಸೆ ಅವರ ಉತ್ತಮ ಜೊತೆಯಾಟದ ನೆರವಿನಿಂದ ೧೮.೩ ಓವರ್‌ಗಳಲ್ಲಿ ೧೮೪ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**